ವಿಷಯ : ಗ್ರಾಮ ಅಭಿವೃದ್ಧಿಯ ಕಾಮಗಾರಿಗಳು
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ ೨೦೩(೭೦೭)

ಶ್ರೀ ಎಂ. ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶು ಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ವಿಶ್ವ ಬ್ಯಾಂಕ್ ಆರ್ಥಿಕ ಸಹಾಯದೊಡನೆ ರಾಜ್ಯದಲ್ಲಿ ಗ್ರಾಮ ನೈರ್ಮಲ್ಯ ಹಾಗೂ ಗ್ರಾಮೀಣಾಭಿವೃದ್ಧಿಗಳ ಕಾರ್ಯಗಳನ್ನು ಕೈಗೊಳ್ಳಲು ಸರ್ಕಾರ ಉದ್ದೇಶಿಸಿದೆಯೇ ?

ಆ) ಹಾಗಿದ್ದಲ್ಲಿ ಈ ಯೋಜನೆಯ ಅಂದಾಜು ಎಷ್ಟು ?

ಇ) ಈ ಯೋಜನೆಯನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು ?

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರು) : ಅ) ಹೌದು

ಆ) ೧೪೫.೪೬ ಕೋಟಿ ರೂಪಾಯಿಗಳು

ಇ) ೧೯೯೭-೯೭ ರಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿದೆ.

ಶ್ರೀ ಎಂ. ಎಸ್. ಆತ್ಮಾನಂದ : ವಿಶ್ವ ಬ್ಯಾಂಕ್‌ನ ಆರ್ಥಿಕ ಸಹಾಯದೊಡನೆ ರಾಜ್ಯದಲ್ಲಿ ಗ್ರಾಮ ನೈರ್ಮಲ್ಯ ಮತ್ತು ಗ್ರಾಮಾಭಿವೃದ್ಧಿ ಕಾರ್ಯಗಳಿಗೆ ಸುಮಾರು ೧೪೫.೪೬ ಕೋಟಿಯನ್ನು ಖರ್ಚು ಮಾಡಿ ಈ ಯೋಜನೆಯನ್ನು ಅನುಷ್ಠಾನಗೊಳಿಸುತ್ತೇವೆಂದು ತಿಳಿಸಿದ್ದಾರೆ. ಈ ಯೋಜನೆಯ ವಿವರಗಳು ಏನು ಹಾಗೂ ಗ್ರಾಮ ನೈರ್ಮಲ್ಯಕ್ಕೆ ಎಷ್ಟು ಇಟ್ಟಿದ್ದೀರಿ ಅಂತೆಯೇ ಗ್ರಾಮಾಭಿವೃದ್ಧಿಗೆ ಎಷ್ಟು ಹಣವನ್ನು ಖರ್ಚು ಮಾಡಲು ಆಲೋಚಿಸಿದ್ದೀರಿ ಎಂದು ತಿಳಿಯಬಯಸುತ್ತೇನೆ. ೧೯೯೭-೯೭ ರಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿದ್ದೇವೆಂದು ಹೇಳಿದ್ದೀರಿ. ಇದರ ಬದಲು ಬರತಕ್ಕಂತಹ ಆರ್ಥಿಕ ವರ್ಷವಾದ ೧೯೯೭-೯೮ ನೇ ಇಸವಿಯಿಂದ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಇರತಕ್ಕಂತಹ ತೊಡಕು ಏನು ಎಂದು ಕೇಳಬಯಸುತ್ತೇನೆ.

ಶ್ರೀ ಬಿ. ಬಸವಲಿಂಗಪ್ಪ : ೧೯೯೭-೯೭ ರಲ್ಲಿ ಆಗತಕ್ಕಂತಹ ಈ ಯೋಜನೆಯ ಬಗ್ಗೆ ದೂರವಾಣಿ ಮಾಡಿದ್ದೇವೆ. ನ್ಯಾಷನಲ್ ಇಂಡಸ್ಟ್ರಿಯಲ್ ಡೆವಲಪ್‌ಮೆಂಟ್ ಕಾರ್ಪೊರೇಷನ್ನಿನಿಂದ ಇದರ ಹಣ ಇನ್ನೂ ಮಂಜೂರಾಗಿಲ್ಲ. ಅಲ್ಲಿಂದ ಹಣ ಬಂದ ಮೇಲೆ ಈ ಯೋಜನೆಯನ್ನು ಕಾರ್ಯಗತ ಮಾಡುವುದಕ್ಕೆ ಪ್ರಯತ್ನ ಮಾಡುತ್ತೇವೆ. ಒಂದು ಸಾವಿರ ಗ್ರಾಮಗಳಿಗೆ ಅನುಗುಣವಾಗಿ ಈ ಯೋಜನೆಯನ್ನು ತಯಾರು ಮಾಡಲಾಗಿದೆ.